**All India Radio: Bangalore**
**Regional Bulletin In Kannada**
**25.10.2025 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**25.10.2025 / 6.40p.m.**

**<><><><>**

ಮುಖ್ಯಾಂಶಗಳು

೧. ವೈದ್ಯಕೀಯ ವಿದ್ಯಾರ್ಥಿಗಳು ಸಮಾಜಮುಖಿಯಾಗಲು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

೨. ಬಿ ಖಾತಾದಿಂದ ಎ ಖಾತಾ ಪರಿವರ್ತನೆ ಶುಲ್ಕದ ಕುರಿತು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅಸಮಾಧಾನ

೩. ಯುವ ವಕೀಲರು ವೃತ್ತಿ ಬದುಕಿನ ಮೊದಲ ಹೆಜ್ಜೆಯನ್ನು ವಿಚಾರಣಾ ನ್ಯಾಯಾಲಯದಿಂದ ಆರಂಭಿಸಿ - ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಎಂ.ಆರ್. ಅರವಿಂದ್ ಸಲಹೆ

೪. ಬೆಂಗಳೂರಿನಲ್ಲಿ ಸಂಸದ್ ಕ್ರೀಡಾ ಮಹೋತ್ಸವಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಚಾಲನೆ

***************

ವೈದ್ಯಕೀಯ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು, ಸಮಾಜಮುಖಿಯಾಗಿ ಸೇವೆ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಾಳಿದಾಸ ಹೆಲ್ತ್ ಎಜುಕೇಶನ್ ಮತ್ತು ಬೆಂಗಳೂರಿನ ಅಹಿಲ್ಯಾ ಟ್ರಸ್ಟ್ ವತಿಯಿಂದ ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ೨೦೨೫ನೇ ಸಾಲಿನ ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಸರ್ಕಾರಿ ಕೋಟಾದಡಿ ಎಂಬಿಬಿಎಸ್ ಶಿಕ್ಷಣಕ್ಕೆ ಪ್ರವೇಶ ಪಡೆದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರೇರಣಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಎಂಬಿಬಿಎಸ್ ಶಿಕ್ಷಣಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಿ ಪ್ರೋತ್ಸಾಹ ನೀಡಲಾಗುತ್ತಿದೆ. ಸಂಸ್ಥೆಯ ರೂವಾರಿಗಳು, ಉತ್ತಮ ಸಾಮಾಜಿಕ ಕೆಲಸದಲ್ಲಿ ತೊಡಗಿಕೊಂಡಿರುವುದು ಅನುಕರಣೀಯವಾದುದು ಎಂದು ಪ್ರಶಂಸಿದರು. ಇಂದಿನ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಸ್ಥಾನಕ್ಕೇರಿದಾಗ, ಸಮಾಜಿಕ ಚಿಂತನೆಯಿಂದ ದುಡಿಯಬೇಕು. ತಾವು ಗಳಿಸುವ ಸಂಪತ್ತಿನ ಸಣ್ಣ ಪಾಲನ್ನು ಸಮಾಜದ ಒಳಿತಿಗಾಗಿ ಸದ್ಬಳಕೆ ಮಾಡಿ ಎಂದು ಭವಿಷ್ಯದ ವೈದ್ಯರಿಗೆ ಮುಖ್ಯಮಂತ್ರಿಗಳು ಕರೆ ನೀಡಿದರು.

***************

ಕಿತ್ತೂರು ಕೋಟೆ ಆವರಣದಲ್ಲಿ ಆಯೋಜಿತ, ಮೂರು ದಿನಗಳ ಕಿತ್ತೂರು ವಿಜಯೋತ್ಸವಕ್ಕಿಂದು ತೆರೆ ಬೀಳಲಿದೆ. ಕಿತ್ತೂರು ರಾಣಿ ಚೆನ್ನಮ್ಮಳ ವಿಜಯೋತ್ಸವದ ೨೦೧ನೇ ವಾರ್ಷಿಕೋತ್ಸವವನ್ನು ಸಂಭ್ರಮಿಸುವ ಕಿತ್ತೂರು ಉತ್ಸವದ ಸಮಾರೋಪ ಸಮಾರಂಭದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸಲಿದ್ದಾರೆ. ಅವರೊಂದಿಗೆ ಸಚಿವರಾದ ಶಿವರಾಜ್ ತಂಗಡಗಿ, ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಶಾಸಕ ಬಾಬಾಸಾಹೇಬ ಪಾಟೀಲ್ ಉಪಸ್ಥಿತರಿರಲಿದ್ದಾರೆ. ವಿಚಾರ ಸಂಕಿರಣ, ವಿಶೇಷ ಉಪನ್ಯಾಸ, ಹಲವಾರು ಕಲಾವಿದರಿಂದ ಮೂಡಿದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಕಿತ್ತೂರು ಉತ್ಸವದಲ್ಲಿ ಜನಾಕರ್ಷಣೆ ಪಡೆದುಕೊಂಡವು.

***************

ಬಿ ಖಾತಾ ದಿಂದ ಎ ಖಾತಾ ಮಾಡಿಕೊಡುವ ಭರವಸೆಯೊಂದಿಗೆ ಪ್ರತಿ ನಿವೇಶನಕ್ಕೆ ದುಬಾರಿ ವೆಚ್ಚ ವಿಧಿಸಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತಾವು ಅಧಿಕಾರಕ್ಕೆ ಬಂದು ಅತ್ಯಂತ ಕಡಿಮೆ ವೆಚ್ಚದಲ್ಲಿ ಎ ಖಾತಾ ಮಾಡಿಕೊಡುವ ಭರವಸೆ ನೀಡಿದ್ದಾರೆ. ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಮುಖ್ಯಮಂತ್ರಿಯಾಗಿದ್ದಾಗ ಪ್ರತಿ ಚದರ ಅಡಿಗೆ ೧೧೦ ರೂಪಾಯಿ ನಿಗದಿ ಮಾಡಿ, ಈ ಕೆಲಸ ಮಾಡಿಕೊಡಲು ಆದೇಶ ಹೊರಡಿಸಿದ್ದರು. ತಮ್ಮ ಸರ್ಕಾರದ ಅವಧಿಯಲ್ಲಿ ಪ್ರತಿ ಚದರ ಅಡಿಗೆ ೨೦೦ ರಿಂದ ೬೦೦ ರೂಪಾಯಿ ಶುಲ್ಕ ನಿಗದಿ ಮಾಡಲಾಗಿತ್ತು. ಆದರೆ ಪ್ರಸ್ತುತ ರಾಜ್ಯ ಸರ್ಕಾರ ಪ್ರತಿ ಚದರ ಅಡಿಗೆ ಸಾವಿರಾರು ರೂಪಾಯಿ ನಿಗದಿ ಮಾಡಿದೆ ಎಂದು ಆರೋಪಿಸಿದರು. ಕೇಂದ್ರ ಸರ್ಕಾರದ ಕೈಗಾರಿಕಾ ಯೋಜನೆಗಳನ್ನು ಅನುಷ್ಠಾನಗೊಳಿಸುವುದು ತಮ್ಮ ಜವಾಬ್ದಾರಿಯಾಗಿದ್ದು, ಬೆಂಗಳೂರಿಗೆ ೪ ಸಾವಿರದ ೫೦೦ ವಿದ್ಯುತ್ ಚಾಲಿತ ಬಸ್‌ಗಳನ್ನು ನೀಡಲಾಗಿದೆ ಬೇರೆ ಯಾವ ರಾಜ್ಯಕ್ಕೂ ಈ ಪ್ರಮಾಣದಲ್ಲಿ ಬಸ್‌ಗಳನ್ನು ನೀಡಲಾಗಿಲ್ಲ. ರಾಜ್ಯ ಸರ್ಕಾರ ರಾಜ್ಯದಲ್ಲಿ ಕೈಗಾರಿಕೆಗಳು ಬಂದು ನೆಲೆಸುವಂತಹ ವಾತಾವರಣ ನಿರ್ಮಿಸಬೇಕಿದೆ ಎಂದರು. ಹೆಚ್.ಡಿ. ಕುಮಾರಸ್ವಾಮಿಯವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಚಿವರು ಇಲ್ಲದ ಆರೋಪ ಮಾಡುತ್ತಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚರ್ಚೆ ವಾದ ವಿವಾದಕ್ಕೆ ಅವಕಾಶವಿದೆ. ಆದರೆ ಇಲ್ಲ ಸಲ್ಲದ ಆರೋಪ ಮಾಡುವುದು ತರವಲ್ಲ. ತಮ್ಮ ವಿರುದ್ಧವಿರುವ ದಾಖಲೆ ತಂದು ಬಹಿರಂಗ ಚರ್ಚೆಯಲ್ಲಿ ಭಾಗವಹಿಸಲಿ ಎಂದರು.

***************

ವಕೀಲವೃತ್ತಿ ಆರಂಭಿಸುವ ಯುವ ವಕೀಲರು ತಮ್ಮ ವೃತ್ತಿ ಬದುಕಿನ ಮೊದಲ ಹೆಜ್ಜೆಯನ್ನು ವಿಚಾರಣಾ ನ್ಯಾಯಾಲಯದಿಂದಲೇ ಆರಂಭಿಸುವುದು ಉತ್ತಮ ಎಂದು ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಎಂ.ಆರ್. ಅರವಿಂದ ಕುಮಾರ್ ಸಲಹೆ ನೀಡಿದ್ದಾರೆ. ಬೆಂಗಳೂರಿನ ಸಿಟಿ ಸಿವಿಲ್ ಕೋರ್ಟ್ ಆವರಣದಲ್ಲಿ ನಡೆದ ನ್ಯಾಯಮಿತ್ರ ಸಹಕಾರಿ ಸಂಘದ ರಜತ ಮಹೋತ್ಸವವನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಉದ್ಘಾಟಿಸಿ ಮಾತನಾಡಿದ ಅವರು, ರಜತ ಮಹೋತ್ಸವ, ಸ್ಥಿರತೆ, ಬಾಂಧವ್ಯ, ಬದ್ಧತೆ ಮತ್ತು ಸಾಧನೆಯ ಸಂಕೇತವಾಗಿದೆ. ವಕೀಲರು ಸಮಾಜದ ವೈದ್ಯರಂತಿದ್ದು, ದೇಶವನ್ನು ಬದಲಾಯಿಸುವ ಶಕ್ತಿ ಅವರಿಗಿದೆ ಎಂದರು. ವಕೀಲರಿಗಾಗಿ ವಸತಿ ನಿವೇಶನಗಳನ್ನು ಮಂಜೂರು ಮಾಡುವಂತೆ ಹಾಗೂ ಸಮುದಾಯ ಭವನ ನಿರ್ಮಾಣಕ್ಕೆ ಅಗತ್ಯ ಭೂಮಿಯನ್ನು ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು. ಬಳಿಕ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದಲ್ಲಿ ಎಲ್ಲ ಅಭಿವೃದ್ಧಿ ಕೆಲಸಗಳಿಗೆ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ, ಆಕ್ಷೇಪಣೆ ಸಲ್ಲಿಸಿ ನ್ಯಾಯಾಲಯದಿಂದ ತಡೆಯಾಜ್ಞೆ ತರಲಾಗುತ್ತಿದೆ. ಎಲ್ಲರೂ ಸಕಾರಾತ್ಮಕವಾಗಿ ಕೆಲಸ ಮಾಡುವ ಅಗತ್ಯವಿದೆ. ಬೆಂಗಳೂರಿನ ಸಂಚಾರ ದಟ್ಟಣೆ ಕುರಿತು ಟೀಕೆ ಮಾಡುತ್ತಿರುವವರು ಪರಿಹಾರವನ್ನು ಒದಗಿಸಬೇಕು ಎಂದರು. ಬೆಂಗಳೂರು ಬೃಹದಾಕಾರವಾಗಿ ಬೆಳೆದಿದ್ದು, ಆಡಳಿತ ಸುಲಭವಾಗಿಸುವ ನಿಟ್ಟಿನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರಚಿಸಿ ೫ ಪಾಲಿಕೆಗಳನ್ನು ಮಾಡಲಾಗಿದೆ. ಬೆಂಗಳೂರು ಆಯುಕ್ತರ ವೆಚ್ಚದ ಮಿತಿಯನ್ನು ೧ ಕೋಟಿಯಿಂದ ೩ ಕೋಟಿಗೆ ಏರಿಸಲಾಗಿದ್ದು, ಒಟ್ಟು ೫ ಆಯುಕ್ತರಿಂದ ೧೫ ಕೋಟಿಗೆ ವಿಸ್ತರಣೆ ಮಾಡಲಾಗಿದೆ. ಇದರ ಜೊತೆಗೆ ಮೇಯರ್‌ಗಳ ವೆಚ್ಚದ ಮಿತಿಯನ್ನು ೧೦ ಕೋಟಿ ಏರಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಕರ್ನಾಟಕ ಹಾಗೂ ಉಚ್ಚನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು, ರಾಜ್ಯ ಬಾರ್ ಕೌನ್ಸಿಲ್ ಅಧ್ಯಕ್ಷ ಎಂ.ಎಸ್. ಶೇಖರಪ್ಪ ಮತ್ತಿತರರು ಪಾಲ್ಗೊಂಡಿದ್ದರು.

***************

ವಿಕಸಿತ ಭಾರತಕ್ಕೆ ಯುವಶಕ್ತಿಯನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ದೇಶಾದ್ಯಂತ ಕಳೆದ ಸೆಪ್ಟೆಂಬರ್ ೨೧ರಿಂದ ನಡೆಯುತ್ತಿರುವ ಸಂಸದ್ ಖೇಲ್ ಮಹೋತ್ಸವದ ಭಾಗವಾಗಿ ಬೆಂಗಳೂರಿನ ಉತ್ತರ ಲೋಕಸಭಾ ಕ್ಷೇತ್ರದ ಕೆ.ಆರ್.ಪುರಂನಲ್ಲಿ ಆಯೋಜಿಸಲಾಗಿರುವ ಸಂಸದ್ ಕ್ರೀಡಾ ಮಹೋತ್ಸವಕ್ಕೆ ಇಂದು ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು. ಹಿರಿಯ ನಾಗರಿಕರಿಗಾಗಿ ಬ್ಯಾಡ್ಮಿಂಟನ್, - ಟಗ್ ಆಫ್ ವಾರ್, ಲೆಮನ್ ಅಂಡ್ ಸ್ಪೂನ್ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು

ಆಯೋಜಿಸಲಾಗಿತ್ತು. ಬಳಿಕ, ಮಾತನಾಡಿದ ಸಚಿವೆ ಶೋಭಾ ಕರಂದಾಜ್ಲೆ, ಯುವ ಜನತೆ ಕ್ರೀಡೆಯತ್ತ ಹೆಚ್ಚು ಆಸಕ್ತಿ ತೋರಿಸಬೇಕು.  ಇದಕ್ಕೆ ಪೋಷಕರ ಸಹಕಾರ ಅತ್ಯಗತ್ಯ. ಪೋಷಕರು ಮಕ್ಕಳನ್ನು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಲು ಉತ್ತೇಜನ ನೀಡಬೇಕು. ಆರೋಗ್ಯದಿಂದಿರಲು ಯೋಗ, ಕ್ರೀಡೆ ಸಹಕಾರಿಯಾಗಿದೆ. ಯುವ ಜನಾಂಗ ಸದೃಢವಾಗಿದ್ದರೆ ದೇಶ ಸದೃಢವಾಗಿರುತ್ತೆ ಎಂಬ ಆಶಯದೊಂದಿಗೆ ಪ್ರಧಾನಿ ನರೇಂದ್ರ ಮೋದಿಯವರು ಫಿಟ್ ಇಂಡಿಯಾ ಅಭಿಯಾನ ಆರಂಭಿಸಿದ್ದಾರೆ. ಇದನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕ್ರೀಡಾಕ್ಷೇತ್ರದಲ್ಲಿ ಸಾಧನೆ ಮೆರೆದ ಸಾಧಕರನ್ನು ಸನ್ಮಾನಿಸಿ ಗೌರವ ಸಲ್ಲಿಸಲಾಯಿತು.

***************

ರಾಜ್ಯದ ಬಡತನ ರೇಖೆಗಿಂತ ಕೆಳಗಿರುವ ಕಾರ್ಡ್ ದಾರರಿಗೆ ಎಣ್ಣೆ, ಬೆಳೆ ಕಾಳುಗಳನ್ನು ವಿತರಿಸಲಾಗುವುದು ಎಂದು ಆಹಾರ ನಾಗರಿಕ ಪೂರೈಕೆ ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ. ಮೈಸೂರಿನ ವಸ್ತುಪ್ರದರ್ಶನ ಆವರಣದಲ್ಲಿ ಏರ್ಪಡಿಸಲಾಗಿದ್ದ ಆಹಾರ ಮಳಿಗೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ ಬಿಪಿಎಲ್ ಕಾರ್ಡ್ ದಾರರಿಗೆ ತಲಾ ೧೦ಕೆಜಿ ಅಕ್ಕಿ ವಿತರಣೆ ಮಾಡುತ್ತಿದ್ದು ಅದರಲ್ಲಿ ೫ಕೆಜಿ ಅಕ್ಕಿಯ ಬದಲು ಎಣ್ಣೆ, ಬೆಳೆ ಕಾಳುಗಳನ್ನು ವಿತರಿಸಲು ತೀರ್ಮಾನಿಸಲಾಗಿದೆ. ಮುಂದಿನ ತಿಂಗಳಿನಿಂದ ಈ ಯೋಜನೆ ಜಾರಿಗೊಳ್ಳಲಿದೆ ಎಂದರು.  ಕಾರ್ಡ್ ದಾರರ ಬೇಡಿಕೆಗೆ ಅನುಗುಣವಾಗಿ ಅಕ್ಕಿಯ ಬದಲು ಪೌಷ್ಟಿಕಾಂಶಯುಕ್ತ ಬೆಳೆ ಕಾಳು ಹಾಗೂ ಎಣ್ಣೆ ವಿತರಿಸಲಾಗುವುದು. ರಾಜ್ಯದಲ್ಲಿ ೪ ಕೋಟಿ ೫೦ ಲಕ್ಷ ಫಲಾನುಭವಿಗಳಿದ್ದಾರೆ ಎಲ್ಲರಿಗೂ ಈ ಯೋಜನೆ ಅನುಷ್ಠಾನವಾಗಲಿದೆ. ಈಗಾಗಲೇ ಫಲಾನುಭವಿಗಳು ತೆರಿಗೆದಾರರಾಗಿದ್ದರೆ ಹಾಗೂ ೭ ಎಕರೆಗೂ ಹೆಚ್ಚು ಜಮೀನು ಹೊಂದಿದ್ದರೆ ಅಂಥವರ ಕಾರ್ಡ್ ಗಳು ಬಿಪಿಎಲ್ ನಿಂದ ಎಪಿಎಲ್ ಗೆ ವರ್ಗಾಹಿಸಲಾಗುವುದು ಎಂದರು.

***************

ಕರ್ನಾಟಕವನ್ನು ಆರೋಗ್ಯವಂತ ರಾಜ್ಯವನ್ನಾಗಿ ಮಾಡಲು ಸರ್ಕಾರ ಬದ್ಧವಾಗಿದೆ. ಇತ್ತೀಚೆಗೆ ಹೆಚ್ಚು ಅಗತ್ಯವಾಗಿರುವ ಅಂಗಾಂಗ ಕಸಿ ಕ್ಷೇತ್ರಕ್ಕೆ ಹೆಚ್ಚು ಆದ್ಯತೆ ನೀಡಲು ಮುಂದಾಗಿರುವುದಾಗಿ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಪಾಟೀಲ್ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಬಿ.ಜಿ.ನಗರದಲ್ಲಿ ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ೨೦೨೫ನೇ ಸಾಲಿನ ಎಂಬಿಬಿಎಸ್ ಮತ್ತು ಅನ್ವಯಿಕ ಆರೋಗ್ಯ ವಿಜ್ಞಾನ ಕೋರ್ಸ್‌ನ ವಿದ್ಯಾರ್ಥಿಗಳ ಸೇರ್ಪಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಈಗಾಗಲೇ ಗ್ಯಾಸ್ಟ್ರೋಎಂಟರಾಲಜಿ ಮತ್ತು ಅಂಗಾಂಗ ಕಸಿ ಸಂಸ್ಥೆಯ ಮೂಲಕ ರಾಜ್ಯದಲ್ಲಿ ಪ್ರಮುಖ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಅಂಗಾಂಗ ಕಸಿಯನ್ನು ಸರ್ಕಾರಿ ಸಂಸ್ಥೆಯಿಂದಲೇ ಮಾಡಲಾಗುತ್ತಿದೆ. ಎಲ್ಲರಿಗೂ ಉತ್ತಮ ಆರೋಗ್ಯ ನೀಡಬೇಕು ಎನ್ನುವುದು ಸರ್ಕಾರದ ಗುರಿಯಾಗಿದೆ ಎಂದು ತಿಳಿಸಿದರು. ಅಂಗಾಂಗ ಕಸಿ ಖಾಸಗಿಯಾಗಿ ಮಾಡಿಸಿದರೆ ಲಕ್ಷಾಂತರ ರೂಪಾಯಿ ವೆಚ್ಚ ಮಾಡಬೇಕಾಗುತ್ತದೆ. ಅತ್ಯಾಧುನಿಕ ವೈದ್ಯಕೀಯ ಸಾಧನಗಳೊಂದಿಗೆ, ಮಿತವ್ಯಯವಾಗಿ ಅಂಗಾಂಗ ಕಸಿ ಸೇವೆ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

***************

ಆರ್‌ಎಸ್‌ಎಸ್ ವಿರುದ್ಧದ ಸರ್ಕಾರದ ಆದೇಶ ಮೂಲ ಸಂವಿಧನದ ವಿರುದ್ಧವಾಗಿದ್ದು, ಈ ಪ್ರಕರಣ ನ್ಯಾಯಾಲಯದಲ್ಲಿ ನಿಲ್ಲುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತ ಒಂದು ಸ್ವತಂತ್ರ ದೇಶ ಇಲ್ಲಿ ವಾಕ್ ಸ್ವಾತಂತ್ರ್ಯ, ವ್ಯಕ್ತಿ ಸ್ವಾತಂತ್ರ್ಯ ಮತ್ತು ಸಾಮಾಜಿಕ, ಧಾರ್ಮಿಕ ಸ್ವಾತಂತ್ರ್ಯವಿದೆ. ಆದ್ದರಿಂದ ಆರ್‌ಎಸ್‌ಎಸ್‌ನಂತಹ ಸಂಸ್ಥೆಗಳ ಕಾರ್ಯಕ್ರಮಗಳಿಂದ ದೂರ ಉಳಿಯಲು ಆದೇಶಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಇತರ ಸಂಘಟನೆಗಳು ಪಥ ಸಂಚಲನಕ್ಕೆ ಅವಕಾಶ ಮಾಡಿಕೊಡಲು ಕೋರಿರುವ ಕುರಿತು ಮಾತನಾಡಿದ

ಅವರು, ದೇಶದಲ್ಲಿ ಪಥಸಂಚಲನ ಕೋರುವ ಸಂಘಟನೆಗಳಿಗೆ ಅವಕಾಶ ಮಾಡಿಕೊಡಬೇಕು. ಪಥಸಂಚಲನ ಅವಕಾಶ ಕುರಿತ ವಿಚಾರದಲ್ಲಿ ನ್ಯಾಯಾಲಯ ಸರಿಯಾದ ತೀರ್ಮಾನ ಮಾಡಿದೆ. ಈ ವೇಳೆ ಶಾಂತಿ, ಸುವ್ಯವಸ್ಥೆ ಕಾಪಾಡಿ ಅವಕಾಶ ಕಲ್ಪಿಸಬೇಕು ಎಂದು ಸೂಚಿಸಿದೆ. ಆದರೆ ಸರ್ಕಾರದ ಆದೇಶದಿಂದ ಗೊಂದಲ ಉಂಟಾಗಿದೆ ಎಂದು ಹೇಳಿದರು.

***************

ಹಾಸನ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಕೈಗಾರಿಕಾ ತರಬೇತಿ ಸಂಸ್ಥೆ ಸೇರಿದಂತೆ ವಿವಿದೆಡೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ್ ಆರ್.ಪಾಟೀಲ ಅವರು ಭೇಟಿ ನೀಡಿ ನಿರ್ಮಾಣ ಹಂತದಲ್ಲಿನ ಕಾಮಗಾರಿಗಳ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಹಂತದಲ್ಲಿದ್ದು ವಿವಿಧ ಕಾರಣಗಳಿಂದ ಕಾಮಗಾರಿ ಅರ್ಧಕ್ಕೆ ನಿಂತಿತ್ತು ಇದೀಗ ತಾವು ಸಚಿವ ಸಂಪುಟದಲ್ಲಿ ಅದಕ್ಕೆ ಅನುಮೋದನೆ ನೀಡಿ ಕಾಮಗಾರಿ ಮುಂದುವರಿಸಲು ಸೂಚನೆ ನೀಡಲಾಗಿದೆ ಎಂದರು.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕಿನ ಹಾರೋಹಳ್ಳಿ ಗ್ರಾಮದಲ್ಲಿ ೬೦ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ ನೂತನ ಗ್ರಾಮ ಪಂಚಾಯಿತಿ ಕಟ್ಟಡದ ಉದ್ಘಾಟನೆಯನ್ನು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ.ಹೆಚ್ ಮುನಿಯಪ್ಪ ನೆರವೇರಿಸಿದರು.

***************